ಮಾದರಿ ನೀತಿ ಸಂಹಿತೆ ಜಾರಿ; ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ಡಿಸಿ ಸಭೆ

ಪ್ರಚಾರ,ಇತರೆ ಕಾರ್ಯಗಳಿಗೆ ಸುವಿಧಾ ತಂತ್ರಾಂಶದಲ್ಲಿ ಅನುಮತಿ ಕಡ್ಡಾಯ-ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ

ಬಳ್ಳಾರಿ,ಮಾ.: ಲೋಕಸಭೆ ಸಾರ್ವತ್ರಿಕ ಚುನಾವಣೆ 2024 ರ ಚುನಾವಣೆ ಘೋಳಣೆಯಾಗಿದ್ದು, ಜಿಲ್ಲೆಯಲ್ಲಿ (ಮಾ.16 ರಿಂದ) ಮಾದರಿ ನೀತಿ ಸಂಹಿತೆ ಜಾರಿಯಾಗಿದೆ. ಸಾರ್ವಜನಕ ಸಭೆ, ಸಮಾರಂಭ, ರ್‍ಯಾಲಿ ನಡೆಸಲು, ಸಂಚಾರಿ ವಾಹನ, ಧ್ವನಿವರ್ಧಕ, ಹೆಲಿಕಾಪ್ಟರ್ ಹಾಗೂ ಹೆಲಿಪ್ಯಾಡ್ ಮತ್ತು ಇನ್ನಿತರೆ ನಯಮಗಳಿಗೆ ಸುವಿಧಾ ತಂತ್ರಾಂಶ ಮೂಲಕವೇ ಅನುಮತಿ ಪಡೆಯಬೇಕು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.ಭಾನುವಾರದಂದು, ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಲೋಕಸಭೆ ಸಾರ್ವತ್ರಿಕ ಚುನಾವಣಾ ವೇಳಾಪಟ್ಟಿಯಂತೆ 2024ರ ಏಪ್ರಿಲ್ 12 (ಶುಕ್ರವಾರ) ಅಧಿಸೂಚನೆ ಹೊರಡಿಸುವುದು. ನಾಮಪತ್ರ ಸಲ್ಲಿಸಲು ಏಪ್ರಿಲ್ 19ರ ಶುಕ್ರವಾರ ಕೊನೆಯ ದಿನಾಂಕವಾಗಿದ್ದು, ಏಪ್ರಿಲ್ 20ರ ಶನವಾರ ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಏಪ್ರಿಲ್ 22ರ ಸೋಮವಾರ ನಾಮಪತ್ರಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನವಾಗಿದ್ದು, 2024ರ ಮೇ 07 ರ ಮಂಗಳವಾರ ಮತದಾನ ದಿನ, ಜೂನ್ 04ರ ಮಂಗಳವಾರ ಮತ ಎಣಿಕೆ ಹಾಗೂ 06-05-2024ರ ಗುರುವಾರದಂದು ಸಂಪೂರ್ಣ ಚುನಾವಣೆ ಪ್ರಕ್ರಿಯೆ ಪೂರ್ಣಗೊಳ್ಳಬೇಕಾದ ದಿನಾಂಕವಾಗಿದೆ ಎಂದು ಹೇಳಿದರು.

ಲೋಕಸಭೆ ಚುನಾವಣೆ ಅಂಗವಾಗಿ ಮಾದರಿ ನೀತಿ ಸಂಹಿತೆಯನ್ನು ಕಟ್ಟು ನಿಟ್ಟಾಗಿ ಪಾಲಿಸಲು ಚುನಾವಣಾ ಆಯೋಗವು ಜಾರಿಗೊಳಿಸಿರುವ ನೀತಿ ಸಂಹಿತೆಗಳನ್ನು ರಾಜಕೀಯ ಪಕ್ಷಗಳು ತಪ್ಪದೇ ಪಾಲಿಸುವಂತೆ ಅವರು ಸೂಚನೆ ನೀಡಿದರು. ಮಾದರಿ ನೀತಿ ಸಂಹಿತೆ ಜಾರಿಯಾದ ಹಿನ್ನಲೆಯಲ್ಲಿ ತಮ್ಮ ಪಕ್ಷದ ಚಿನ್ಹೆಯ ವಾಹನ, ಫ್ಲೆಕ್ಸ್ ಹಾಗೂ ಇನ್ನಿತರೆ ರಾಜಕೀಯ ಸಂಬಂಧ ಬ್ಯಾನರ್ ಗಳಿದ್ದಲ್ಲಿ ಸ್ವಯಂ ಪ್ರೇರಿತವಾಗಿ ತೆರವುಗೊಳಿಸಬೇಕು. ರಾಜಕೀಯ ಪಕ್ಷದವರು ಯಾವುದೇ ರ್‍ಯಾಲಿ ಮಾಡುವುದಕ್ಕೆ, ರಾಜಕೀಯು ಪಕ್ಷಗಳ ಸಭೆ ಸಮಾರಂಭ ಆಯೋಜಿಸುವುದಕ್ಕೆ ಅನುಮತಿ ಪಡೆಯಬೇಕು ಎಂದರು.

ಪ್ರಚಾರ ಕಾರ್ಯದಲ್ಲಿ ಯಾವುದೇ ಧಾರ್ಮಿಕ ಸಂಸ್ಥೆ, ಸ್ಥಳಗಳನ್ನು ಬಳಸುವಂತಿಲ್ಲ, 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಬಳಸಿಕೊಳ್ಳಬಾರದು. ಮದುವೆ, ಸಭೆ - ಸಮಾರಂಭಗಳಲ್ಲಿ ಮತ ಪ್ರಚಾರ ಮಾಡುವಂತಿಲ್ಲ ಎಂದು ತಿಳಿಸಿದರು.

ಲೋಕಸಭೆ ಸಾರ್ವತ್ರಿಕ ಚುನಾವಣೆಯನ್ನು ನಿಷ್ಪಕ್ಷಪಾತ, ನ್ಯಾಯಸಮ್ಮತವಾಗಿ ನಡೆಸಲು ಚುನಾವಣೆ ಆಯೋಗದ ನಿರ್ದೇಶನದ ಅನ್ವಯ ಕಾರ್ಯಚಟುವಟಿಕೆಗಳನ್ನು ನಡೆಸಿ ಜಿಲ್ಲಾಡಳಿತಕ್ಕೆ ಯಶಸ್ವಿ ಚುನಾವಣೆ ನಡೆಸಲು ಎಲ್ಲ ಪಕ್ಷದವರು ಸಹಕರಿಸಬೇಕು ಎಂದು ಕೋರಿದರು. ಈ ಸಂದರ್ಭದಲ್ಲಿ ಜಿಲ್ಲಾ ಸ್ವೀಪ್ ಸಮಿತಿಯ ನೋಡೆಲ್ ಅಧಿಕಾರಿ ಹಾಗೂ ಜಿಪಂ ಸಿಇಒ ರಾಹುಲ್ ಶರಣಪ್ಪ ಸಂಕನೂರ, ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಮತ್ತು ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆ: ಪೂರ್ವಭಾವಿ ಸಭೆ ಅಗತ್ಯ ಸಿದ್ಧತೆಗೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ

(1 ನೇ ಪುಟದಿಂದ)

ಸಮಯಕ್ಕೆ ಸರಿಯಾಗಿ ಪರೀಕ್ಷಾ ಕೇಂದ್ರಗಳಿಗೆ ತೆರಳಲು ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಅಗತ್ಯ ಬಸ್ ವ್ಯವಸ್ಥೆಯನ್ನು ಕಲ್ಪಿಸಬೇಕು. ಪರೀಕ್ಷಾ ದಿನದಂದು ಪರೀಕ್ಷಾ ಕೇಂದ್ರಗಳಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ಕೈಗೊಳ್ಳಬೇಕು.

ಪರೀಕ್ಷೆ ಬರೆಯುವ ವಿದ್ಯಾರ್ಥಿಗಳು ಹಾಗೂ ಪರೀಕ್ಷಾ ಕಾರ್ಯಕ್ಕೆ ನಯೋಜನೆಗೊಂಡ ಶಿಕ್ಷಕರು, ಅಧಿಕಾರಿ, ಸಿಬ್ಬಂದಿಗಳನ್ನು ಹೊರತುಪಡಿಸಿ, ಇನ್ನುಳಿದವರ ಪ್ರವೇಶಕ್ಕೆ ಅವಕಾಶ ನೀಡಬಾರದು ಎಂದರು.

ಪರೀಕ್ಷಾ ಕೇಂದ್ರದ 200 ಮೀಟರ್ ಸುತ್ತಲು ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಪರೀಕ್ಷೆ ನಡೆಸುವುದಕ್ಕೆ ಸಂಬಂಧಿಸಿದಂತೆ ಸರ್ಕಾರದ ಸೂಚನೆಗಳನ್ನು ಎಲ್ಲ ಅಧಿಕಾರಿಗಳು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ನಿರ್ದೇಶನ ನೀಡಿದರು.

ಪರೀಕ್ಷಾ ಪೂರ್ವ ಹಾಗೂ ಪರೀಕ್ಷಾ ಸಮಯದಲ್ಲಿ ಪಶ್ನೆ ಪತ್ರಿಕೆ ಸೋರಿಕೆ ಮಾಡುವುದು ಕಂಡುಬಂದಲ್ಲಿ ಅಂತವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು. ಶಿಕ್ಷಕರು, ಪರೀಕ್ಷಾ ನಯೋಜಿತ ಸಿಬ್ಬಂದಿಗಳು ಜವಾಬ್ದಾರಿ ಹಾಗೂ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಭೀಮಾಶಂಕರ ಗುಳೇದ ಅವರು ಸೂಚನೆ ನೀಡಿದರು. ಪರೀಕ್ಷೆ ಕೇಂದ್ರಕ್ಕೆ ಸಿಸಿಟಿವಿ, ಕುಡಿಯುವ ನೀರು, ಶೌಚಾಲಯ, ಕೊಠಡಿ ಇತ್ಯಾದಿಗಳನ್ನು ವ್ಯವಸ್ಥಿತವಾಗಿ ಒದಗಿಸುವ ಕಾರ್ಯವೂ ವೇಗವಾಗಿ ನಡೆಯುತ್ತಿದೆ. ಸುಗಮವಾಗಿ ಪರೀಕ್ಷೆ ನಡೆಸುವಂತೆ ಎಲ್ಲಾ ಸಿದ್ದತೆ ಮಾಡಿಕೊಳ್ಳಲಾಗಿದೆ ಎಂದು ಡಿಡಿಪಿಐ ಮೋಹನ ಕುಮಾರ್ ಹಂಚಾಟೆ ಮಾಹಿತಿ ನೀಡಿದರು.

ಪ್ರಾಚಾರ್ಯರಾದ ಎಸ್. ಡಿ ಗಂಜಿ, ಜಿಲ್ಲೆಯ ಎಲ್ಲ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬಿ.ಆರ್‌ಪಿ ಸಮನ್ವಯ ಅಧಿಕಾರಿಗಳು, ಎಸ್.ಎಸ್.ಎಲ್.ಸಿ ನೋಡಲ್ ಅಧಿಕಾರಿಗಳು, ಎಸ್.ಎಸ್.ಎಲ್.ಸಿ ಕೇಂದ್ರಗಳ ಪರೀಕ್ಷಾ ಮುಖ್ಯ ಅಧೀಕ್ಷಕರು, ಸಹಾಯಕ ಅಧಿಕ್ಷಕರು ಉಪಸ್ಥಿತರಿದ್ದರು.

ಡಾ.ಧರ್ಮಾರೆಡ್ಡಿ,ಡಾ.ಶೋಭಾ ದಂಪತಿಗಳಿಂದ ಮುಂದುವರೆದ ಮತ್ತೊಂದು ಸಮಾಜಸೇವೆ

ಪ್ರಯತ್ನ ಫೌಂಡೇಷನ್‌ನಿಂದ ಸ್ಲಂ ಪ್ರದೇಶದ ಜನರಿಗೆ,ದನ ಕರುಗಳಿಗೆ ದಿನನಿತ್ಯ ಟ್ಯಾಂಕರ್‌ನಿಂದ ನೀರು ಸರಬರಾಜು

ಬಳ್ಳಾರಿ ಮಾ :. ಬಳ್ಳಾರಿಯ ಖ್ಯಾತ ವೈದ್ಯರಾದ ಬಳ್ಳಾರಿ ಹೆಲ್ತ್ ಸಿಟಿ ಹಾಸ್ಪೆಟಲ್‌ನ ಸರ್ಜಿಕಲ್ (ಗ್ಯಾಸ್ಟ್ರೋ ಎಂಟರಾಲಜಿ) ನಿಪುಣರಾದ ಡಾ.ಧರ್ಮಾರೆಡ್ಡಿಯವರಿಂದ 450 ಕ್ಕೆ ಹೆಚ್ಚು ಉಚಿತ ಆರೋಗ್ಯ ತಪಾಸಣೆ ಶಿಬಿರ ಕಾರ್ಯಕ್ರಮಗಳು, ಉಚಿತ ಔಷದಿಗಳ ವಿತರಣೆ, ಹಸುಗಳಿಗೆ(ದನ ಕರುಗಳಿಗೆ) ನೀರು ಕುಡಿಯಲು ದೋಣಿಗಳನ್ನು ಆಯೋಜನೆ ಮಾಡಿದ್ದಲ್ಲದೇ, ಮತ್ತಿತರ ಸಮಾಜ ಸೇವೆ ಮಾಡುವ ಚಟುವಟಿಕೆಗಳಲ್ಲಿ ಭಾಗವಹಿಸಿದ್ದಲ್ಲದೇ, ಬೇಸಿಗೆ ಕಾಲದಲ್ಲಿ ನೀರಿನ ಅಭಾವ ಹೆಚ್ಚಿಗೆ ಇರುವದರಿಂದ ಸ್ಲಂ ಪ್ರದೇಶಗಳಲ್ಲಿ ಬಡವರಿಗೆ ತೊಂದರೆಯಾಗದಂತೆ ಬೀದಿ ಬೀದಿಗೆ ಟ್ಯಾಂಕರ್‌ನಂದ ನೀರನ್ನು ಸರಬರಾಜು ಮಾಡುತಿದ್ದಾರೆ.

ಡಾ ಧರ್ಮರೆಡ್ಡಿ ಮತ್ತು ಡಾ ಶೋಭಾ ದಂಪತಿಗಳು ಸ್ಥಾಪಿಸಿದ ಪ್ರಯತ್ನ ಫೌಂಡೇಶನ್ ಲಾಭರಹಿತ ಟ್ರಸ್ಟ್ ಆಗಿದ್ದು, ಈ ಪ್ರತಿಷ್ಠಾನದ ಮೂಲಕ ನಾವು ವಿಶೇಳವಾಗಿ ಬಡವರು ಮತ್ತು ದೀನದಲಿತರಿಗಾಗಿ ಸಾಮಾಜಿಕ ಕಾರ್ಯಗಳನ್ನು ಮಾಡುತ್ತಿದ್ದೇವೆ. ಈ ವರ್ಷ ಮಳೆಯ ಕೊರತೆಯು ಬರಗಾಲದಂತಹ ಪರಿಸ್ಥಿತಿಯನ್ನು ಉಂಟುಮಾಡಿದ್ದು, ಮತ್ತು ಜನರು ನೀರಿಗಾಗಿ ಹೆಣಗಾಡುತ್ತಿದ್ದಾರೆ, ವಿಶೇಳವಾಗಿ ಕೊಳಚೆ ಪ್ರದೇಶಗಳಲ್ಲಿ ವಾಸಿಸುವ ಜನರು ತೊಂದರೆಯನ್ನು ಅನುಭವಿಸುತಿದ್ದಾರೆ, ಆದ್ದರಿಂದ ನಾವು ಪ್ರತಿಷ್ಠಾನದ ಮೂಲಕ ಅಗತ್ಯವಿರುವ ಜನರಿಗೆ ಉಚಿತ ನೀರು ಸರಬರಾಜು ಮಾಡುತಿದ್ದೇವೆ, ಈ ಸಮಾಜ ಸೇವೆ ಮಾಡುವುದರಲ್ಲಿ ಬಹಳಷ್ಟು ನೆಮ್ಮದಿ,ಶಾಂತಿ,ಸಂತೋಷವಿದೆ ಎಂದರು.

ಇವರ ಈ ಸೇವೆಗಳನ್ನು ಪಡೆದ ಸಾರ್ವಜನಕರು ಮಾತನಾಡುತ್ತಾ ಮನೆಯ ತುಂಬಾ ಹಣವಿದ್ದರೇ ಸರಿಹೋಗದು,ದಾನ ಮಾಡುವ ಗುಣವಿರಬೇಕು. ಆ ಗುಣ ಎಲ್ಲರಿಗೂ ಇರೋದಿಲ್ಲ, ನೂರರಲ್ಲಿ ಒಬ್ಬರಿಗೆ ದಾನ,ಧರ್ಮ,ಪಾಪ,ಪುಣ್ಯ ಒಳ್ಳೆಯದು,ಕೆಟ್ಟದು ಅಂತ ಇರುತ್ತದೆ, ಆ ನೂರರಲ್ಲಿ ಒಬ್ಬರು ಇವರೆಂದರೇ ತಪ್ಪಾಗಲಾರದು ಎಂದು ಮೆಚ್ಚುಗೆಯನ್ನು ವ್ಯಕ್ತಪಡಿಸಿ ಶುಭ ಹಾರೈಸಿದ್ದಾರೆ.

ಬಿಜೆಪಿ ಕಛೇರಿಯಲ್ಲಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ಮೋಕ ಅಧ್ಯಕ್ಷತೆಯಲ್ಲಿ ಲೋಕಸಭಾ ಚುನಾವಣೆ ಪ್ರಯುಕ್ತ ಸಭೆ,ಚರ್ಚೆ

ಬಳ್ಳಾರಿ ಮಾ : ಬಳ್ಳಾರಿ ಜಿಲ್ಲಾ ಬಿಜೆಪಿ ಕಛೇರಿಯಲ್ಲಿ ಜಿಲ್ಲಾಧ್ಯಕ್ಷ ಅನಲ್ ಕುಮಾರ್ ಮೋಕ ಅಧ್ಯಕ್ಷತೆಯಲ್ಲಿ ಲೋಕಸಭಾ ಚುನಾವಣೆ ಪ್ರಯುಕ್ತ ಸಭೆ ನಡೆಸಲಾಯಿತು. ಭಾರತೀಯ ಜನತಾ ಪಕ್ಷದ ಕಛೇರಿಯಲ್ಲಿ ಪಕ್ಷದ ಪದಾಧಿಕಾರಿಗಳು, ಮಂಡಲ ಅಧ್ಯಕ್ಷರು, ವಿವಿಧ ಮೋರ್ಚಾಗಳ ಅಧ್ಯಕ್ಷರು ಹಾಗೂ ಪ್ರಮುಖರ ಸಭೆ ನಡೆಸಿ ಚುನಾವಣೆ ಪೂರ್ವತಯಾರಿ ಕುರಿತು ಚರ್ಚಿಸಲಾಯಿತು. ಈ ಸಂದರ್ಭದಲ್ಲಿ ಬಳ್ಳಾರಿ ಲೋಕಸಭಾ ಕ್ಷೇತ್ರದ ಭಾರತೀಯ ಜನತಾ ಪಾರ್ಟಿಯ ಅಭ್ಯರ್ಥಿಯಾದ ಬಿ ಶ್ರೀರಾಮುಲು ರವರು ಪ್ರಮುಖರನ್ನು ಉದ್ದೇಶಿಸಿ ಮಾತನಾಡಿದರುಪ್ರಧಾನಮಂತ್ರಿಗಳಾದ ನರೇಂದ್ರ ಮೋದಿಜೀ ಅವರನ್ನು 3 ನೇ ಅವಧಿಗೆ ಪ್ರಧಾನಮಂತ್ರಿಗಳಾಗಿ ಆಯ್ಕೆ ಮಾಡುವ ನಿಟ್ಟಿನಲ್ಲಿ ನಾವೆಲ್ಲರೂ ಕೇಂದ್ರ ಸರ್ಕಾರದ ಸಾಧನೆಗಳನ್ನು ಪ್ರತಿಯೊಬ್ಬರ ಮನೆ ಮನಗಳಿಗೆ ತಲುಪಿಸಬೇಕು. ಅಲ್ಲದೇ ಅವರ ಹಿಂದಿನ ಅವಧಿಯಲ್ಲಿ ಮಾಡಿದ ಸಾಧನೆಗಳು ಹಾಗೂ ಪ್ರಸ್ತುತ ಅವಧಿಯಲ್ಲಿ ಬಳ್ಳಾರಿ ಲೋಕಸಭಾ ಕ್ಷೇತ್ರದಲ್ಲಿ ಆದ ಪ್ರತಿಯೊಂದು ಅಭಿವೃದ್ಧಿ ಕಾರ್ಯವನ್ನು ಜನರಿಗೆ ಮನದಟ್ಟು ಮಾಡಬೇಕು ಎಂದು ತಿಳಿಸಿದರು.ಈ ಸಂದರ್ಭದಲ್ಲಿ ವೈ ಎಂ.ಸತೀಶ್,ಸೋಮಶೇಖರ್ ರೆಡ್ಡಿ ಮಾಜಿ ಶಾಸಕರು ಬಳ್ಳಾರಿ ನಗರ, ಪಕ್ಕಿರಪ್ಪ ಮಾಜಿ ಸಂಸದರು ರಾಯಚೂರು ಜಿಲ್ಲೆ, ಟಿ.ಹೆಚ್.ಸುರೇಶ ಬಾಬು ಮಾಜಿ ಶಾಸಕರು ಕಂಪ್ಲಿ, ಗುತ್ತಿಗನೂರು ವಿರೂಪಾಕ್ಷಪ್ಪ ಮಾಜಿ ಅಧ್ಯಕ್ಷರು ರಾಜ್ಯ ಜವಳಿ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ಮಂಡಳಿ, ಗುರುಲಿಂಗನ ಗೌಡ ರಾಜ್ಯ ರೈತ ಮೋರ್ಚಾ ಉಪಾಧ್ಯಕ್ಷರು, ಓಬಳೇಶ್ ರಾಜ್ಯ ಎಸ್ ಟಿ ಮೋರ್ಚಾ ಉಪಾಧ್ಯಕ್ಷರು,ನೂರ್ ಬಾಶ್ ರಾಜ್ಯ ಅಲ್ಪಸಂಖ್ಯಾತ ಮೋರ್ಚಾ ಉಪಾಧ್ಯಕ್ಷರು,ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಉಡೇದ ಸುರೇಶ್, ಹುಲುಗಪ್ಪ,ಸೋಮಶೇಖರ್ ಗೌಡ, ಡಾ॥ ಮಹಿಪಾಲ್ ಬಿಜೆಪಿ ಹಿರಿಯ ಮುಖಂಡರು,ಜಿಲ್ಲಾ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷರು ಸುಗುಣ, ರಾಜ್ಯ ಪದಾಧಿಕಾರಿಗಳು, ಜಿಲ್ಲಾ ಪದಾಧಿಕಾರಿಗಳು, ಬಳ್ಳಾರಿ ಜಿಲ್ಲಾ ಮೋರ್ಚಾ ಗಳ ಅಧ್ಯಕ್ಷರು ಮತ್ತು ಪ್ರಧಾನ ಕಾರ್ಯದರ್ಶಿಗಳು, ಮಂಡಲ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ಬಳ್ಳಾರಿ ಮಹಾನಗರ ಪಾಲಿಕೆ ಸದಸ್ಯರು, ಜಿಲ್ಲಾ ಪ್ರಕೋಷ್ಠ ಸಂಚಾಲಕರು, ಲೋಕಸಭಾ ಚುನಾವಣೆ ಉಸ್ತುವಾರಿಗಳು, ಮಾಧ್ಯಮ ಸಂಚಾಲಕರು, ವಕ್ತಾರರು, ಹಾಗೂ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

ಲೋಕಸಭಾ ಸಾರ್ವತ್ರಿಕ ಚುಣಾವಣೆ-2024: ಜಿಲ್ಲಾ ಚುನಾವಣಾಧಿಕಾರಿಗಳಿಂದ ಸುದ್ದಿಗೋಷ್ಠಿ

ಕೊಪ್ಪಳ ಲೋಕಸಭಾ ಕ್ಷೇತ್ರದಲ್ಲಿ ಒಟ್ಟು 18,51,700 ಮತದಾರರು : ಡಿಸಿ ನಲಿನ್ ಅತುಲ್

ಕೊಪ್ಪಳ, ಮಾರ್ಚ್ ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ಕ್ಕೆ ಜಿಲ್ಲಾ ಚುನಾವಣಾಧಿಕಾರಿಗಳ ಕಾರ್ಯಾಲಯದಿಂದ ಎಲ್ಲ ಅಗತ್ಯ ಸಿದ್ದತೆ ಮಾಡಿಕೊಳ್ಳಲಾಗಿದ್ದು, ಕೊಪ್ಪಳ ಲೋಕಸಭಾ ಕ್ಷೇತ್ರದಲ್ಲಿ ಒಟ್ಟು 18,51,700 ಮತದಾರರು ಮತದಾನ ಮಾಡಲಿದ್ದಾರೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ನಲಿನ್ ಅತುಲ್ ಅವರು ತಿಳಿಸಿದರು.ಭಾನುವಾರದಂದು ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ರ ಅಂಗವಾಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆಯಲಾಗಿದ್ದ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.ಈಗಾಗಲೇ ಭಾರತ ಚುನಾವಣಾ ಆಯೋಗವು 2024ರ ಲೋಕಸಭಾ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟ ಮಾಡಿದ್ದು, ಮಾ.16 ರಿಂದ ಮಾದರಿ ನೀತಿ ಸಂಹಿತೆ ಜಾರಿಯಾಗಿದೆ. ಕರ್ನಾಟಕದಲ್ಲಿ ಒಟ್ಟು 2 ಹಂತದಲ್ಲಿ ಚುನಾವಣೆಯನ್ನು ಜರುಗಿಸಲು ಆಯೋಗವು ನಿರ್ಧರಿಸಿದ್ದು, 08-ಕೊಪ್ಪಳ ಲೋಕಸಭಾ ಕ್ಷೇತ್ರಕ್ಕೆ 2ನೇ ಹಂತದಲ್ಲಿ ಚುನಾವಣೆ ನಡೆಸಲಾಗುತ್ತಿದೆ. ಕೊಪ್ಪಳ ಲೋಕಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಏಪ್ರಿಲ್ 12ರಂದು ಅಧಿಸೂಚನೆ ಪ್ರಕಟವಾಗಲಿದೆ. ನಾಮಪತ್ರಗಳನ್ನು ಸಲ್ಲಿಸಲು ಏಪ್ರಿಲ್ 19 ಕೊನೆಯ ದಿನವಾಗಿದ್ದು, ಏ.20ಕ್ಕೆ ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ನಾಮಪತ್ರಗಳನ್ನು ಹಿಂತೆಗೆದುಕೊಳ್ಳಲು ಏ.22 ಕೊನೆಯ ದಿನವಾಗಿದೆ. ಮೇ 7ರಂದು ಮತದಾನ ಹಾಗೂ ಜೂನ್ 4ರಂದು ಮತ ಎಣಿಕೆ ನಡೆಯಲಿದೆ ಎಂದರು. ಸಹಾಯಕ ಚುನಾವಣಾಧಿಕಾರಿಗಳ ವಿವರ: ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಬಿ ಕಡಿ ಅವರನ್ನು ಸಹಾಯಕ ಚುನಾವಣಾಧಿಕಾರಿಯನ್ನಾಗಿ ನೇಮಕ ಮಾಡಲಾಗಿದೆ. ಅದೇ ರೀತಿ ಕೊಪ್ಪಳ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ವಿಧಾನಸಭಾ ಕ್ಷೇತ್ರವಾರು ಸಹಾಯಕ ಚುನಾವಣಾಧಿಕಾರಿಗಳನ್ನು ನೇಮಕ ಮಾಡಲಾಗಿದ್ದು, 60-ಕುಷ್ಟಗಿ ವಿಧಾನಸಭಾ ಕ್ಷೇತ್ರಕ್ಕೆ ಕೊಪ್ಪಳ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ರೇಷ್ಮಾ ಹಾನಗಲ್, 61-ಕನಕಗಿರಿ ವಿಧಾನಸಭಾ ಕ್ಷೇತ್ರಕ್ಕೆ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳಾದ ಮಲ್ಲಪ್ಪ ತೊದಲಬಾಗಿ, 62-ಗಂಗಾವತಿ ವಿಧಾನಸಭಾ ಕ್ಷೇತ್ರಕ್ಕೆ ಕೊಪ್ಪಳ ಸಹಾಯಕ ಆಯುಕ್ತರಾದ ಕ್ಯಾಪ್ಟನ್ ಮಹೇಶ ಕುಮಾರ ಮಾಲಗಿತ್ತಿ, 63-ಯಲಬುರ್ಗಾ ವಿಧಾನಸಭಾ ಕ್ಷೇತ್ರಕ್ಕೆ ಜಂಟಿ ಕೃಷಿ ನಿರ್ದೇಶಕರಾದ ರುದ್ರೇಶಪ್ಪ, 64-ಕೊಪ್ಪಳ ವಿಧಾನಸಭಾ ಕ್ಷೇತ್ರಕ್ಕೆ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪನಿರ್ದೇಶಕರಾದ ಅನ್ನಪೂರ್ಣ ಮುದುಕಮ್ಮನವರ, 58-ಸಿಂಧನೂರು ವಿಧಾನಸಭಾ ಕ್ಷೇತ್ರಕ್ಕೆ ರಾಯಚೂರು ಸಮಾಜಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಮಹೇಶ ಪೋತೆದಾರ, 59-ಮಸ್ಕಿ ವಿಧಾನಸಭಾ ಕ್ಷೇತ್ರಕ್ಕೆ ರಾಯಚೂರು ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಜಗದೀಶ ಹಾಗೂ 92-ಸಿರಗುಪ್ಪ ವಿಧಾನಸಭಾ ಕ್ಷೇತ್ರಕ್ಕೆ ಬಳ್ಳಾರಿಯ ಜಂಟಿ ಕೃಷಿನಿರ್ದೇಶಕರಾದ ತಿರುಮಲೇಶ ಎಂ. ಇವರು ಸಹಾಯಕ ಚುನಾವಣಾಧಿಕಾರಿಗಳಾಗಿದ್ದಾರೆ ಎಂದರು.ಮಾದರಿ ನೀತಿ ಸಂಹಿತೆಯ ಸಮರ್ಪಕ ಅನುಷ್ಠಾನಕ್ಕಾಗಿ ಕೊಪ್ಪಳ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 47 ಫ್ಲೈಯಿಂಗ್ ಸ್ಕಾ ?ವಡ್, ಒಟ್ಟು 32 ಚೆಕ್‌ಪೋಸ್ಟ್, ಒಟ್ಟು 27 ವಿಡಿಯೋ ಸರ್ವಲೆನ್ಸ್ ತಂಡ ಹಾಗೂ ಒಟ್ಟು 168 ಸೆಕ್ಟರ್ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಅಲ್ಲದೇ ಮಾ.16 ರಿಂದ ಜೂನ್ 06 ರವರೆಗೆ ಮಾದರಿ ನೀತಿ ಸಂಹಿತೆಯು ಜಾರಿಯಲ್ಲಿದ್ದು, ಜಿಲ್ಲೆಯಲ್ಲಿ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲು ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳನ್ನು ಜಿಲ್ಲಾ ಮಾದರಿ ನೀತಿ ಸಂಹಿತೆ ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ. ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್ ಇವರುಗಳನ್ನು ವಿಧಾನಸಭಾ ಮಟ್ಟದಲ್ಲಿ ಮಾದರಿ ನೀತಿ ಸಂಹಿತೆ ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ ಎಂದು ಹೇಳಿದರು. ಮತದಾರರ ವಿವರ: 8-ಕೊಪ್ಪಳ ಲೋಕಸಭಾ ಕ್ಷೇತ್ರವು ಕೊಪ್ಪಳ ಜಿಲ್ಲೆಯ 60-ಕುಷ್ಟಗಿ, 61-ಕನಕಗಿರಿ, 62-ಗಂಗಾವತಿ, 63-ಯಲಬುರ್ಗಾ ಹಾಗೂ 64-ಕೊಪ್ಪಳ ವಿಧಾನಸಭಾ ಕ್ಷೇತ್ರಗಳು ಸೇರಿದಂತೆ 58-ಸಿಂಧನೂರು, 59-ಮಸ್ಕಿ ಹಾಗೂ 92-ಸಿರಗುಪ್ಪಿ ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿದೆ. ಜಿಲ್ಲೆಯ 5 ವಿಧಾನಸಭಾ ಕ್ಷೇತ್ರಗಳಲ್ಲಿ ಮಾರ್ಚ್ 16 ರಂತೆ ಒಟ್ಟು 1317 ಮತಗಟ್ಟೆಗಳು, 5,79,404 ಪುರುಷ ಮತಾದರರು, 5,89,690 ಮಹಿಳಾ ಮತದಾರರು ಮತ್ತು 57 ಲಿಂಗತ್ವ ಅಲ್ಪಸಂಖ್ಯಾತರು ಸೇರಿದಂತೆ ಒಟ್ಟು 11,69,151 ಮತದಾರರಿದ್ದಾರೆ. ಸಿಂಧನೂರು, ಮಸ್ಕಿ ಹಾಗೂ ಸಿರಗುಪ್ಪಿ ವಿಧಾನಸಭಾ ಕ್ಷೇತ್ರಗಳು ಸೇರಿದಂತೆ ಒಟ್ಟು 2045 ಮತಗಟ್ಟೆಗಳಿದ್ದು, ಮಾರ್ಚ್ 16 ರ ಮತದಾರರ ಪಟ್ಟಿಯಂತೆ 9,12,818 ಪುರುಷ ಮತದಾರರು, 9,38,750 ಮಹಿಳಾ ಮತದಾರರು ಹಾಗೂ 132 ಲಿಂಗತ್ವ ಅಲ್ಪಸಂಖ್ಯಾತ ಮತದಾರರು ಸೇರಿದಂತೆ ಒಟ್ಟು 18,51,700 ಮತದಾರರು 8-ಕೊಪ್ಪಳ ಲೋಕಸಭಾ ಕ್ಷೇತ್ರದಲ್ಲಿ ಮತದಾನ ಮಾಡಲಿದ್ದಾರೆ. ಒಟ್ಟು 18,51,700 ಮತದಾರರಲ್ಲಿ 46162 ಯುವ ಮತದಾರರು, 25,619 ವಿಕಲಚೇತನ ಮತದಾರರು, 12,900 ಮತದಾರರು 85 ವರ್ಷ ಮೇಲ್ಪಟ್ಟವರು ಹಾಗೂ 609 ಸೇವಾ ಮತದಾರರಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಮಾಹಿತಿ ನೀಡಿದರು.ಭಾರತ ಚುನಾವಣಾ ಆಯೋಗವು ವಿಕಲಚೇತನ ಮತದಾರರಿಗೆ ಮತ್ತು 85 ವರ್ಷ ಮೇಲ್ಪಟ್ಟ ವಯೋಮಾನ ಮತದಾರರು ಮತ್ತು ಕೋವಿಡ್ ಶಂಕಿತ/ಬಾಧಿತ ಮತದಾರರಿಗೆ ಮತಚಲಾಯಿಸಲು ಅನುಕೂಲವಾಗುವಂತೆ ಮನೆಯಿಂದಲೇ ಮತದಾನಕ್ಕೆ ಅವಕಾಶ ನೀಡಿದೆ. ಮತದಾರರು ಬಯಸಿದಲ್ಲಿ ನೇರವಾಗಿ ಮತಗಟ್ಟೆಗೆ ಬಂದು ಮತ ಚಲಾಯಿಸಬಹುದು ಅಥವಾ ಮನೆಯಿಂದಲೇ ಮತದಾನಕ್ಕೆ ನಮೂನೆ-12 ಡಿ ಯಲ್ಲಿ ಅರ್ಜಿ ಸಲ್ಲಿಸಿದಲ್ಲಿ ಮತಗಟ್ಟೆ ಅಧಿಕಾರಿಗಳು ಮತದಾರರ ಮನೆಗೆ ತೆರಳಿ ಅವರಿಂದ ಮತದಾನಕ್ಕೆ ವ್ಯವಸ್ಥೆ ಕಲ್ಪಿಸುತ್ತಾರೆ. ಮತಗಟ್ಟೆಗೆ ಬಂದು ಮತದಾನ ಮಾಡುವ ವಿಕಲಚೇತನರು ಹಾಗೂ ವಯೋವೃದ್ಧರಿಗೆ ಚುನಾವಣಾ ಆಯೋಗದಿಂದ ಗಾಲಿ ಕುರ್ಚಿ, ಸ್ವಯಂ ಸೇವಕರ ವ್ಯವಸ್ಥೆ, ವಾಹನಕಗಳ ವ್ಯವಸ್ಥೆ, ಸರತಿಯಲ್ಲಿ ಕಾಯದೆ ಮತ ಚಲಾಯಿಸಲು ಅವಕಾಶ ಕಲ್ಪಿಸಿದೆ. ಇದರೊಂದಿಗೆ **Saksham-ECI app** ಮೂಲಕ ಗಾಲಿ ಕುರ್ಚಿ ವ್ಯವಸ್ಥೆಗೆ ಮನವಿ ಸಲ್ಲಿಸಬಹುದು. ಸೇವಾ ಮತದಾರರಿಗೆ ಮತ ಚಲಾಯಿಸಲು **ETPBS** ತಂತ್ರಾಂಶವನ್ನು ಬಳಸಿ ತಂತ್ರಾಂಶದ ಮೂಲಕ ಮತಪತ್ರ ಕಳುಹಿಸಲಾಗುವುದು. ಭಾರತ ಚುನಾವಣಾ ಆಯೋಗದ ನಿರ್ದೇಶನದನ್ವಯ ಕುಷ್ಟಗಿ ಹಾಗೂ ಕೊಪ್ಪಳ ವಿಧಾನಸಭಾ ಕ್ಷೇತ್ರಗಳಲ್ಲಿ 1500 ಕ್ಕಿಂತ ಹೆಚ್ಚು ಮತದಾರರಿರುವ ಮತಗಟ್ಟೆಗಳಲ್ಲಿ ಆಕ್ಸಿಲರಿ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಎಲ್ಲ ಮತಗಟ್ಟೆಗಳಲ್ಲಿ ಮೂಲಭೂತ ಸೌಕರ್ಯಗಳಾದ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ, ವಿಕಲಚೇತನರಿಗೆ ರೇಲಿಂಗ್ ಸಹಿತ ರ್‍ಯಾಂಪ್ ವ್ಯವಸ್ಥೆ, ನೆರಳಿನ ವ್ಯವಸ್ಥೆ, ನಿರಂತರ ವಿದ್ಯುತ್ ವ್ಯವಸ್ಥೆ ಮಾಡಲಾಗಿದೆ ಎಂದು ಅವರು ಕೈಗೊಂಡ ಕ್ರಮಗಳ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

ಚುನಾವಣೆಗಳಲ್ಲಿ ಎದುರಾಗಬಹುದಾದ ಸವಾಲುಗಳಾದ ಹಣ, ಸುಳ್ಳು ಮಾಹಿತಿ, ನೀತಿ ಸಂಹಿತೆ ಉಲ್ಲಂಘನೆ ಮುಂತಾದವುಗಳನ್ನು ಎದುರಿಸು ಎಲ್ಲಾ ಸಿದ್ದತೆಗಳನ್ನು ಮಾಡಿಕೊಳ್ಳಲಾಗಿದೆ.ಈ ಸಂಬಂಧ ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳನ್ನು ನಿಯೋಜಿಸಲಾಗುವುದು. ಶೇ.50 ರಷ್ಟು ಮತಗಟ್ಟೆಗಳಲ್ಲಿ ಸಿಸಿಟಿವಿ ಗಳನ್ನು ಅಳವಡಿಸಿ ವೆಬ್‌ಕಾಸ್ಟಿಂಗ್ ಕೈಗೊಳ್ಳಲಾಗುವುದು. ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಚುನಾವಣಾ ಆಯೊಗದಿಂದ **C-vigil App** ಅನ್ನು ಪರಿಚಯಿಸಿದ್ದು, ಯಾವುದೇ ಸಾರ್ವಜನಕರು ಅನಾಮಧೇಯವಾಗಿ ಅಥವಾ ತಮ್ಮ ವಿವರಗಳನ್ನು ಸಲ್ಲಿಸುವ ಮೂಲಕ ಯಾವುದೇ ಮಾದರಿ ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳ ಬಗ್ಗೆ ದೂರು ಸಲ್ಲಿಸಬಹುದು. ದೂರು ಸಲ್ಲಿಸಿದ ಒಟ್ಟು 100 ನಿಮಿಷಗಳಲ್ಲಿ ಪ್ರಕರಣವನ್ನು ವಿಲೇಗೊಳಿಸಲಾಗುವುದು. ಮಾದರಿ ನೀತಿ ಸಂಹಿತೆಅವಧಿಯಲ್ಲಿ ಎಂಸಿಸಿ ತಂಡಗಳು ಜಪ್ತಿ ಮಾಡುವ ಹಣ, ಮದ್ಯ ಮತ್ತು ಇತರೆ ಸಾಮಗ್ರಿಗಳ ವಿವರಗಳನ್ನು ದಾಖಲಿಸಲು ಇಖಒಖಆ ಆಪ್‌ನ್ನು ಪರಿಚಯಿಸಿರುತ್ತದೆ. ಎಲ್ಲಾ ಎಂಸಿಸಿ ತಂಡಗಳು, ಪೊಲೀಸ್ ಇಲಾಖೆ, ಅಬಕಾರಿ ಇಲಾಖೆ, ವಾಣಿಜ್ಯತೆರಿಗೆ ಇಲಾಖೆ ಅಧಿಕಾರಿಗಳು ಯಾವುದೇ ಹಣ, ಮದ್ಯ ಮತ್ತು ಇತರೆ ಸಾಮಗ್ರಿಗಳನ್ನು ಜಪ್ತಿ ಮಾಡಬೇಕಾದಲ್ಲಿ **ESMSD** ಆಪ್ ಮೂಲಕವೇ ಮಾಡಲಾಗುವುದು ಎಂದು ಚುನಾವಣಾ ಅಕ್ರಮ ತಡೆಗಟ್ಟಲು ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

ಕಳೆದ 2019ರ ಲೋಕಸಭಾ ಸಾರ್ವತ್ರಿಕಚುನಾವಣೆಯಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಶೇ. 70.67ರಷ್ಟು ಮತದಾನವಾಗಿದ್ದು, ಕುಷ್ಟಗಿ, ಕನಕಗಿರಿ, ಗಂಗಾವತಿ, ಯಲಬುರ್ಗಾ ಹಾಗೂ ಕೊಪ್ಪಳ ಐದು ವಿಧಾನಸಭಾ ಕ್ಷೇತ್ರಗಳು ಹಾಗೂ ರಾಯಚೂರು ಜಿಲ್ಲೆಯ ಸಿಂಧನೂರು ಮತ್ತು ಮಸ್ಕಿ ಹಾಗೂ ಬಳ್ಳಾರಿ ಜಿಲ್ಲೆ ಸಿರಗುಪ್ಪ ಸೇರಿದಂತೆ ಕೊಪ್ಪಳ ಲೋಕಸಭಾ ಕ್ಷೇತ್ರದಲ್ಲಿ ಮತದಾನ ಪ್ರಮಾಣ ಶೇ.68.41 ರಷ್ಟಾಗಿತ್ತು. ಈ ಬಾರಿ ಮತದಾನ ಪ್ರಮಾಣ ಹೆಚ್ಚಳಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.ಮಾದರಿ ನೀತಿ ಸಂಹಿತೆ ಅವಧಿಯಲ್ಲಿ ರಾಜಕೀಯ ಪಕ್ಷಗಳು, ಸ್ಪರ್ಧಿಸುವ ಅಭ್ಯರ್ಥಿಗಳು ರಾಜಕೀಯ ಸಭೆ, ಸಮಾರಂಭಗಳು, ಪ್ರಚಾರ ಕಾರ್ಯಕ್ರಮಗಳನ್ನು ಆಯೋಜಿಸಲು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸಹಾಯಕ ಚುನಾವಣಾಧಿಕಾರಿಗಳಿಂದ ಮತ್ತು ಜಿಲ್ಲಾ ವ್ಯಾಪ್ತಿಯಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಚುನಾವಣಾಧಿಕಾರಿಗಳಿಂದ ಕಡ್ಡಾಯವಾಗಿ ಅನುಮತಿ ಪಡೆಯಬೇಕು. ಪ್ರಚಾರ ಕಾರ್ಯಕ್ರಮಗಳಿಗೆ ಉಪಯೋಗಿಸುವ ವಾಹನಗಳಿಗೆ, ಪಕ್ಷದ ಕಛೇರಿ ತೆರೆಯಲು ಸೇರಿದಂತೆ ಎಲ್ಲಾ ಪರವಾನಗಿಗಳಿಗೆ 48 ಗಂಟೆ ಮುಂಚಿತವಾಗಿ ಖಗಗಿಖಆಲೂಂ ೦ಠಿಠಿ ಮೂಲಕ ಅಥವಾ ಲಿಖಿತ ರೂಪದಲ್ಲಿ ಅರ್ಜಿಗಳನ್ನು ಸಲ್ಲಿಸಬೇಕು. ಚುನಾವಣಾಧಿಕಾರಿಗಳ ಕಛೇರಿಯುಲ್ಲಿ ಹಾಗೂ ಸಹಾಯುಕ ಚುನಾವಣಾಧಿಕಾರಿಗಳ ಕಛೇರಿಯಲ್ಲಿ ಮೇಲ್ಕಾಣಿಸಿದ ಅನುಮತಿಗಳಿಗಾಗಿ ಖುಟಿರಟಜ ಘುಟಿಜಂಠಿ ಖಥಿಣಜಟ (ಏಕ ಗವಾಕ್ಷಿ) ವ್ಯವಸ್ಥೆಯನ್ನು ಮಾಡಲಾಗಿರುತ್ತದೆ. ರಾಜಕೀಯ ಪಕ್ಷಗಳು ಮತ್ತು ಸ್ಪರ್ಧಿಸುವ ಅಭ್ಯರ್ಥಿಗಳು ಇದರಿಂದ ಉಪಯೋಗ ಪಡೆದುಕೊಳ್ಳಬಹುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.ಮತದಾರರರಿಗೆ ಅಗತ್ಯವಿರುವ ಮಾಹಿತಿ ಒದಗಿಸಲು, ಯಾವುದೇ ಚುನಾವಣಾ ಸಂಬಂಧಿತ ದೂರುಗಳನ್ನು ಸಲ್ಲಿಸಲು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಟೋಲ್‌ಫ್ರೀ ಸಂಖ್ಯೆ 1950ರೊಂದಿಗೆ ಆುಣಡುಛಿಣ ಅಂಟಿಣಡಿಠಿಟ ಅಜಟಿಣಡಿಜ (ಆಅಅ) ತೆರೆಯಲಾಗಿದೆ. ಮತದಾರರಿಗೆ ಅನುಕೂಲವಾಗಲು ಭಾರತ ಚುನಾವಣಾ ಆಯೋಗವು ಗಿಂಣಜಡಿ ಊಜಟಠಿಟುಟಿಜ ೦ಠಿಠಿ ಮತ್ತು **KYC** ಆಪ್ ಗಳನ್ನು ಪರಿಚಯಿಸಿರುತ್ತದೆ. **Voter Helpline App** ಮೂಲಕ ಮತದಾರರು ತಮ್ಮ ಮತದಾರರ ಗುರುತಿನ ಚೀಟಿ ಸಂಖ್ಯೆ ಅಥವಾ ವಿವರಗಳನ್ನು ದಾಖಲಿಸಿ, ಮತಗಟ್ಟೆ ಹೆಸರು, ವಿಳಾಸ ತಿಳಿದುಕೊಳ್ಳಬಹುದು. ಸೇರ್ಪಡೆ/ತಿದ್ದುಪಡಿ/ತೆಗೆದುಹಾಕಲು ಅರ್ಜಿ ಸಲ್ಲಿಸಬಹುದು, ಇ-ಎಪಿಕ್ ಡೌನ್‌ಲೋಡ್ ಮಾಡಿಕೊಳ್ಳಬಹುದು ಮತ್ತು ಬೂತ್ ಮಟ್ಟದ ಅಧಿಕಾರಿಗಳ ಹಾಗೂ ಮತದಾರರ ನೋಂದಣಾಧಿಕಾರಿಗಳ ವಿವರಗಳನ್ನು ತಿಳಿದುಕೊಳ್ಳಬಹುದು. **KYC** ಆಪ್ ಮೂಲಕ ಅಭ್ಯರ್ಥಿಗಳ ವಿವರ, ಅಫಿಡವಿಟ್‌ಗಳನ್ನು ತಿಳಿದುಕೊಳ್ಳಬಹುದು ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಮಾಹಿತಿ ನೀಡಿದರು.ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ರಾಹುಲ್ ರತ್ನಂ ಪಾಂಡೆಯ ಅವರು ಮಾತನಾಡಿ, ಕಳೆದ 2019ರ ಲೋಕಸಭಾ ಚುನಾವಣೆಯಲ್ಲಿ ಕೊಪ್ಪಳ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಶೇ.68.41 ರಷ್ಟು ಮತದಾನವಾಗಿತ್ತು. 2024ರ ಚುನಾವಣೆಯಲ್ಲಿ ಗಣನೀಯವಾಗಿ ಮತದಾನ ಪ್ರಮಾಣ ಹೆಚ್ಚಿಸಲು ಹಲವಾರು ಮತದಾರರ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಮತದಾನದ ಅರಿವು ಮೂಡಿಸಲು ಗ್ರಾಮೀಣ ಹಾಗೂ ನಗರ, ಪಟ್ಟಣದ ಸುಮಾರು 39,832 ಮತದಾರರಿಗೆ ವಿದ್ಯುನ್ಮಾನ ಮತಯಂತ್ರದ ಮೂಲಕ ಅಣಕು ಮತದಾನದ ಪ್ರಾತ್ಯಾಕ್ಷಿತೆ ಕೈಗೊಳ್ಳಲಾಗಿದೆ. ವಿವಿಧ ಕಾಲೇಜು ವಿದ್ಯಾರ್ಥಿಗಳಿಗೆ ವಿಚಾರ ಸಂಕಿರಣ, ಇತರ ಸ್ಪರ್ಧೆಗಳ ಮೂಲಕ ಮತದಾನ ಮಾಡಲು ಆಕರ್ಷಿಸಲಾಗಿದೆ. ಶೇ.70ಕ್ಕಿಂತ ಕಡಿಮೆ ಮತದಾನ ನಡೆದ ಮತಗಟ್ಟೆಗಳಲ್ಲಿ ಹೆಚ್ಚಿನ ಮತದಾನ ನಡೆಯುವಂತೆ ಜಾಗೃತಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು.

ಸುವ್ಯವಸ್ಥಿತ ಚುನಾವಣಾ ಕಾರ್ಯಕ್ಕೆ ಪೊಲೀಸ್ ಬಂದೋಬಸ್ತ್; ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಶೋಧಾ ವಂಟಗೋಡಿ ಅವರು ಮಾತನಾಡಿ ಲೋಕಸಭಾ ಚುನಾವಣೆಯನ್ನು ಸಂಪೂರ್ಣ ಶಾಂತಿ, ಪಾರದರ್ಶಕ ಹಾಗೂ ನ್ಯಾಯ ಸಮ್ಮತವಾಗಿ ನಡೆಸಲು ಮತ್ತು ಕಾನೂನು ಸುವ್ಯವಸ್ಥೆಯನ್ನು ಕಾಪಾಡಲು ಎಲ್ಲಾ ಸಿದ್ದತೆ ಕೈಗೊಳ್ಳಲಾಗಿದೆ. ರೌಡಿಶೀಟರ್, ಕಮ್ಯುನಲ್ ಗೂಂಡಾ ಸೇರಿದಂತೆ ಪ್ರಕರಣಗಳಲ್ಲಿ ಗುರುತಿಸಲಾದ ರೌಡಿಶೀಟರ್‌ಗಳನ್ನು ಮುಂಜಾಗ್ರತಾ ಕ್ರಮವಾಗಿ ಗಡಿಪಾರಿಗೆ ಕ್ರಮ ಕೈಗೊಳ್ಳಲಾಗಿದೆ. ಚುನಾವಣಾ ಕರ್ತವ್ಯಕ್ಕೆ ವಿವಿಧ ಹಂತದಲ್ಲಿನ ಪೊಲೀಸ್ ಅಧಿಕಾರಿಗಳು ಸೇರಿ ಒಟ್ಟು 2200 ಸಿಬ್ಬಂದಿಗಳ ಅವಶ್ಯಕತೆಯಿದ್ದು, ಸದ್ಯ ಜಿಲ್ಲೆಯಲ್ಲಿ 715 ಜನ ಸಿಬ್ಬಂದಿಗಳಿದ್ದಾರೆ. ಉಳಿದ ಸಿಬ್ಬಂದಿಗಳನ್ನು ಹೊರಗಡೆಯಿಂದ ಕರೆಸಲು ಚುನಾವಣಾ ಆಯೋಗಕ್ಕೆ ಮನವಿ ಮಾಡಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿಗಳ ನಿಯಂತ್ರಣ ಹಾಗೂ ಮೇಲ್ವಿಚಾರಣೆಗೆ ತಂಡ ರಚಿಸಲಾಗಿದೆ. ಯಾವುದೇ ಅಹಿತಕರ ಘಟನೆಗೆ ಅವಕಾಶ ಇಲ್ಲದಂತೆ ಸಾರ್ವಜನಕರು ಹಾಗೂ ಮತದಾರರಿಗೆ ಯಾವುದೇ ತೊಂದರೆಯಾಗದಂತೆ ಭದ್ರತೆಯನ್ನು ಕೈಗೊಳ್ಳಲಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಬಿ ಕಡಿ, ಕೊಪ್ಪಳ ಸಹಾಯಕ ಆಯುಕ್ತರಾದ ಕ್ಯಾಪ್ಟನ್ ಮಹೇಶ ಕುಮಾರ ಮಾಲಗಿತ್ತಿ, ಚುನಾವಣಾ ತಹಶೀಲ್ದಾರರಾದ ಡಿ.ಮಂಜುನಾಥ, ಜಿಲ್ಲಾಧಿಕಾರಿ ಕಚೇರಿ ಚುನಾವಣಾ ವಿಭಾಗದ ನಾಗರಾಜ, ಪ್ರಸನ್ನ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.